# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2068(2451)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಸಣ್ಣ ಉದ್ಯಮಿಗಳಿಗೆ ಪ್ರೋತ್ಸಾಹ

(ಅ) ರಾಜ್ಯದಲ್ಲಿ ಸಣ್ಣ ಉದ್ಯಮಗಳನ್ನು ನಡೆಸಲು ಸರ್ಕಾರದಿಂದ ಯಾವ ರೀತಿ ಪ್ರೋತ್ಸಾಹ ನೀಡಲಾಗುತ್ತಿದೆ; ಈ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆಯೇ;

(ಆ) ಸಣ್ಣ ಉದ್ಯಮಗಳಿಗೆ ಅನುಮತಿ ಪತ್ರಗಳನ್ನು ಪಡೆಯಲು ಇಲಾಖೆಯಿಂದ ಸಾಕಷ್ಟು ತೊಂದರೆಗಳಾಗುತ್ತಿದ್ದು ಪ್ರೋತ್ಸಾಹ ಸಿಗುತ್ತಿಲ್ಲವೆಂಬ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಕೊರೋನಾದಿಂದ ಅನೇಕ ಸಣ್ಣ ಉದ್ಯಮಗಳಿಗೆ ತೊಂದರೆಯಾಗಿದ್ದು, ಈ ಸಂಧರ್ಬದಲ್ಲಿ ಸಣ್ಣ ಉದ್ದಿಮೆದಾರರಿಗೆ ಪ್ರೋತ್ಸಾಹ ನೀಡಲು ಇಲಾಖೆಯಲ್ಲಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ?